ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ಆನ್‌ಲೈನ್ ತರಗತಿಗಳ ಬಗ್ಗೆ

ಶ್ರೀ ವಿಜಯ್ ಸಿಂಗ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

117 (68) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಬೀದರ್ ಜಿಲ್ಲೆಯಲ್ಲಿ ಲಾಕ್‌ಡೌನ್ ಸಮಯದಲ್ಲಿ ವಿದ್ಯಾರ್ಥಿಗಳಿಗೆ ಆನ್‌ಲೈನ್ ತರಗತಿಯನ್ನು ನಡೆಸುತ್ತಿದ್ದು, ಈ ಭಾಗದ ಹಳ್ಳಿಗಳಲ್ಲಿ ಬಡ ವಿದ್ಯಾರ್ಥಿಗಳು ಈ ಸೌಲಭ್ಯದಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಆನ್‌ಲೈನ್ ತರಗತಿಯಿಂದ ವಂಚಿತರಾದ ವಿದ್ಯಾರ್ಥಿಗಳಿಗೆ ಯಾವ ರೀತಿಯ ಸೌಲಭ್ಯಗಳನ್ನು ಒದಗಿಸಲಾಗುವುದು;

(ಆ) ಈ ಭಾಗದ ಕೆಲವು ಹಳ್ಳಿಗಳಲ್ಲಿ ಬಡ ವಿದ್ಯಾರ್ಥಿಗಳು ಆರ್ಥಿಕ ತೊಂದರೆಯಿಂದ ಮೊಬೈಲ್ ಖರೀದಿಸಲು ಸಾಧ್ಯವಾಗದಿರುವುದು ಹಾಗೂ ನೆಟ್‌ವರ್ಕ್ ಸಮಸ್ಯೆಯಿಂದ ಆನ್‌ಲೈನ್ ತರಗತಿಯಲ್ಲಿ ಭಾಗವಹಿಸಲು ಸಾಧ್ಯವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇವುಗಳನ್ನು ಪರಿಹರಿಸಿ, ವಿದ್ಯಾರ್ಥಿಗಳ ಶಿಕ್ಷಣಕ್ಕೆ ನೆರವಾಗಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ?